## ದಿನಾಂಕ: 16.05.2016ರಂದು ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು

ಸಭೆಯಲ್ಲಿ ಹಾಜರಿದ್ದವರು :

1. ಶ್ರೀ ಎಲ್. ಕೃಷ್ಣಮೂರ್ತಿ, ರಾಜ್ಯ ಮಾಹಿತಿ ಆಯುಕ್ತರು
2. ಶ್ರೀ ಶಂಕರ್ ಆರ್. ಪಾಟೀಲ್, ರಾಜ್ಯ ಮಾಹಿತಿ ಆಯುಕ್ತರು
3. ಶ್ರೀ ಎನ್.ಪಿ. ರಮೇಶ್, ರಾಜ್ಯ ಮಾಹಿತಿ ಆಯುಕ್ತರು
4. ಶ್ರೀ ಕೆ.ಎಂ. ಚಂದ್ರೇಗೌಡ, ರಾಜ್ಯ ಮಾಹಿತಿ ಆಯುಕ್ತರು
5. ಶ್ರೀ ಪಿ.ಜಿ. ವಿಜಯಕುಮಾರ್, ರಾಜ್ಯ ಮಾಹಿತಿ ಆಯುಕ್ತರು
6. ಡಾ। ಸುಚೇತನ ಸ್ವರೂಪ, ರಾಜ್ಯ ಮಾಹಿತಿ ಆಯುಕ್ತರು
7. ಶ್ರೀ ಜಿ.ಸಿ. ವೃಷಭೇಂದ್ರಮೂರ್ತಿ, ಕಾರ್ಯದರ್ಶಿ

ಸಭೆಯಲ್ಲಿ ಚರ್ಚಿಸಿದಂತೆ ಇನ್ನು ಮುಂದೆ ಪ್ರತಿ ಸೋಮವಾರ ಬೆಳಿಗ್ಗೆ 10–00 ಗಂಟೆಗೆ ಆಯೋಗದ ಸಭೆ ನಡೆಸಲಾಗುವುದೆಂದು ಹಾಗೂ ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯವನ್ನು ಚರ್ಚಿಸಲಾಯಿತು.

***ಕರ್ನಾಟಕ ಮಾಹಿತಿ ಆಯೋಗದ ನೂತನ ಕಟ್ಟಡದ ಬಗ್ಗೆ:*** ಮಾನ್ಯ ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ಕರ್ನಾಟಕ ಮಾಹಿತಿ ಆಯೋಗದ ನೂತನ ಕಟ್ಟಡವನ್ನು ಲೋಕೋಪಯೋಗಿ ಇಲಾಖೆಯವರಾದ ಮುಖ್ಯ ಅಭಿಯಂತರರೊಂದಿಗೆ ವೀಕ್ಷಿಸಿದ ನಂತರ ಮುಖ್ಯ ಅಭಿಯಂತರರು ಮತ್ತು ಪ್ರಧಾನ ವಾಸ್ತುಶಿಲ್ಪಿಕಾರರೊಂದಿಗೆ ಕಟ್ಟಡ ಕಾಮಗಾರಿ ಬಗ್ಗೆ ಚರ್ಚಿಸಿದ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯವರು ಸದರಿ ಕಟ್ಟಡದ ಪೂರ್ಣ ಕಾಮಗಾರಿಯನ್ನು ಜುಲೈ 2016ರ ಮೂರನೇ ವಾರದೊಳಗೆ ಪೂರ್ಣಗೊಳಿಸಿ ಆಯೋಗದ ವಶಕ್ಕೆ ಹಸ್ತಾಂತರಿಸುವುದಾಗಿ ತಿಳಿಸಿರುತ್ತಾರೆಂದು ಸಭೆಗೆ ತಿಳಿಸಿದರು.

17/5/2016

ರಾಜ್ಯ ಮುಖ್ಯ ಮಾಹಿತಿ ಆಯುಕ್ತರು.